(35)

ಕರ್ನಾಟಕ ಸರ್ಕಾರದ ನಡವಳಿಗಳು.

ವಿಷಯ:-2014-15 ನೇ ಆಯವ್ಯಯದಲ್ಲಿ ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ ಮತ್ತು ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮಗಳಿಗೆ ಸಂಬಂಧಿಸಿದ ಘೋಷಣೆಗಳನ್ನು ಅನುಷ್ಠಾನ-ಗೊಳಿಸುವ ಬಗ್ಗೆ.

ಓದಲಾಗಿದೆ:1)ಸರ್ಕಾರದ ಆದೇಶ ಸಂಖ್ಯೆ:ಸಕಇ 88 ಸಮನ್ವಯ 2013,ದಿ:04-09-2013.
2)ಸರ್ಕಾರದ ಆದೇಶ ಸಂಖ್ಯೆ ಸಕಇ 138 ಎಸ್‌ಡಿಸಿ 2012,ದಿ:03-10-2012.
3) ವ್ಯವಸ್ಥಾಪಕ ನಿರ್ದೇಶಕರು, ಡಾ. ಬಿ.ಆರ್. ಅಂಬೇಡ್ಕರ್ ಅಬಿವೃದ್ಧಿ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ: ಡಾ. ಬಿ.ಆರ್.ಅಂಅನಿ/ಸಂಯೋ:ಬಜೆಟ್: 2014-15/667,ದಿನಾಂಕ:21-04-2014
4)ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ: ಕಮವಾಪಪಂಅನಿ:ಉ.ಯೋ: ಭೂಒಯೋ:2014-15,ದಿನಾಂಕ:07-04-2014.

MD-484
2-4/6/14
23/06

-o-

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಸಂಖ್ಯೆ (1) &(2) ರ ಆದೇಶಗಳಲ್ಲಿ 2013-14 ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ ಹಾಗೂ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತಗಳ ಭೂ ಒಡೆತನ ಯೋಜನೆಯಡಿ ಘಟಕ ವೆಚ್ಚವನ್ನು ರೂ. 5.00 ಲಕ್ಷದಿಂದ ರೂ. 7.50 ಲಕ್ಷಗಳಿಗೆ ಹಾಗೂ ಸ್ವಯಂ ಉದ್ಯೋಗ ಯೋಜನೆಯಡಿಯಲ್ಲಿ ನೀಡಲಾಗುತಿದ್ದ ಸಹಾಯಧನ, ಘಟಕ ವೆಚ್ಚ ಶೇ 33 ರಷ್ಟು ಅಥವಾ ಗರಿಷ್ಠ ರೂ. 1.00 ಲಕ್ಷ್ಯಗಳಿಗೆ ನಿಗಧಿಪಡಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಉಲ್ಲೇಖ (3)&(4) ರ ಪತ್ರಗಳಲ್ಲಿ ವ್ಯವಸ್ಥಾಪಕ ನಿರ್ದೇಶಕರು ಡಾ. ಬಿ.ಆರ್. ಅಂಬೇಡ್ಕರ್ ಅಬಿವೃದ್ಧಿ ನಿಗಮ ನಿಯಮಿತ ಹಾಗೂ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಇವರು 2014-15 ನೇ ಸಾಲಿನ ಆಯವ್ಯಯದ ಕಂಡಿಕೆಯ ಕ್ರ,ಸಂ175 ರಲ್ಲಿ ಘೋಷಿಸಿರುವಂತೆ ಸಹಾಯಧನದ ಗರಿಷ್ಟ ಮಿತಿಯನ್ನು ರೂ. 1.00 ಲಕ್ಷಗಳಿಂದ ರೂ. 2.00 ಲಕ್ಷಗಳಿಗೆ ಹೆಚ್ಚಿಸಲು ಹಾಗೂ ಕ್ರ,ಸಂ,176 ರಲ್ಲಿ ಭೂ ಒಡೆತನ ಯೋಜನೆಯಡಿ ಘಟಕ ವೆಚವನ್ನು ರೂ. 7.50 ಲಕ್ಷಗಳಿಂದ ರೂ. 10.00 ಲಕ್ಷಗಳಿಗೆ ಹೆಚ್ಚಿಸಲು ಈ ಯೋಜನೆಗಳನ್ನು ಅನುಷ್ಠಾನಮಾಡಲು ಅನುಕೂಲವಾಗುವಂತೆ ಆದೇಶ ಹೊರಡಿಸುವಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

So(2)(3)

ಪ್ರಸ್ತಾವನೆಯನ್ನು ಪರಿಶೀಲಿಸಿದ ನಂತರ ಕೆಳಗಿನಂತೆ ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಸಕಇ 91 ಎಸ್‌ಡಿಸಿ 2014,
ಬೆಂಗಳೂರು, ದಿನಾಂಕ: 20/06/2014.

2014-15 ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದ ಡಾ. ಬಿ.ಆರ್. ಅಂಬೇಡ್ಕರ್ ಅಬಿವೃದ್ಧಿ ನಿಗಮ ನಿಯಮಿತ ಹಾಗೂ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತಗಳು

ಅನುಷ್ಠಾನಗೊಳಸುತ್ತಿರುವ ಯೋಜನೆಗಳಗೆ ಈ ಕೆಳಕಂಡಂತೆ ಸಹಾಯಧನ ಹೆಚ್ಚಿಸಿ ಆದೇಶಿಸಲಾಗಿದೆ.

1. 2014-15 ನೇ ಸಾಲಿನಿಂದ ''ಹೆಚ್ಚಿನ ಸಂಖ್ಯೆಯಲ್ಲಿ ಸಾಲವನ್ನು ಬ್ಯಾಂಕುಗಳಂದ ಪಡೆಯಲು ಅನುಕೂಲವಾಗುವಂತೆ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮಗಳಂದ ಘಟಕ ವೆಚ್ಚ ರೂ.1.00 ಲಕ್ಷಗಳಗೆ ಮೀರಿದ ಪ್ರಕರಣಗಳಲ್ಲಿ ಮಾತ್ರ ಸಹಾಯಧನ ಗರಿಷ್ಠ ಮಿತಿಯನ್ನು ರೂ. 1.00 ಲಕ್ಷಗಳಂದ ರೂ. 2.00 ಲಕ್ಷಗಳಗೆ ಹೆಚ್ಚಿಸಲಾಗಿದೆ.

2. 2014-15 ನೇ ಸಾಲಿನಿಂದ ''ಭೂ ಒಡೆತನ ಯೋಜನೆಯಡಿಯಲ್ಲಿ ಜಮೀನು ಇಲ್ಲದಿರುವ ಕೃಷಿ ಕಾರ್ಮಿಕರಿಗೆ ಜಮೀನು ಖರೀದಿ ಮಾಡಿ ವಿತರಿಸಲು ಈಗಿರುವ ಘಟಕ ವೆಚ್ಚವನ್ನು ರೂ. 7.50 ಲಕ್ಷಗಳಂದ ರೂ. 10.00 ಲಕ್ಷಗಳಗೆ ಹೆಚ್ಚಿಸಲಾಗಿದೆ.

ಇದಕ್ಕಾಗಿ ತಗಲುವ ವೆಚ್ಚವನ್ನು 2014-15 ನೇ ಸಾಲಿನ ಆಯವ್ಯಯದಲ್ಲಿ ಪರಿಶಿಷ್ಟ ಜಾತಿಗೆ ಸಂಬಂಧಿಸಿದಂತೆ ಲೆಕ್ಕಶೀರ್ಷಿಕೆ 2225-01-800-0-19, 2225-01-190-2-01 ಹಾಗೂ ಪರಿಶಿಷ್ಟ ಪಂಗಡಕ್ಕೆ ಸಂಬಂಧಿಸಿದಂತೆ ಲೆಕ್ಕಶೀರ್ಷಿಕೆ 2225-02-800-0-06 ರಲ್ಲಿ ನಿಗಮಗಳಗೆ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಭರಿಸತಕ್ಕದ್ದು

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 359 ವೆಚ್ಚ-3/2013, ದಿನಾಂಕ:04-06-2014 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

ವಿ. ರತ್ನ 20/06
(ವಿ.ರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-3,
ಸಮಾಜ ಕಲ್ಯಾಣ ಇಲಾಖೆ.

ಗೆ.

1. ಮಹಾಲೇಖಪಾಲರು, (ಎ ಮತ್ತು ಇ, ಲೆಕ್ಕಪರಿಶೋಧನೆ-1 ಮತ್ತು 2), ಕರ್ನಾಟಕ ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
3. ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು.
6. ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜ್ಹೂರ್ ಖಜಾನೆ, ಬೆಂಗಳೂರು.
7. ಉಪ ನಿರ್ದೇಶಕರು, ಖಜಾನೆ ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಕೇಂದ್ರ, 2ನೇ ಮಹಡಿ, ಸೌತ್ ಬ್ಲಾಕ್, ಖನಿಜ ಭವನ, ದೇವರಾಜ ಅರಸು ರಸ್ತೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ-3 ಮತ್ತು 9) ಆರ್ಥಿಕ ಇಲಾಖೆ, ವಿಧಾನ ಸೌಧ,
9. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ,
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ,
11. ಸರ್ಕಾರದ ಉಪ ಕಾರ್ಯದರ್ಶಿ-1&2, ಸಮಾಜ ಕಲ್ಯಾಣ ಇಲಾಖೆ,ವಿಕಾಸ ಸೌಧ.
12. ಸರ್ಕಾದ ಅಧೀನಕಾರ್ಯದರ್ಶಿ-1 ಮತ್ತು 2, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ.
13. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.